5. ಕ್ರಯದಾರನು ಹರಾಜು ಕಾಲದಲ್ಲಿ ಕ್ರಯದ ಮೊಬಲಗು ಪೈಕಿ ಕೇಕಡಾ 25 ರೂಪಾಯಿನಂತೆ ಆಗುವ ಮೊಬಲಗನ್ನು ಡಿಪಾಜಿಟ್ ಯಿಡಬೇಕಲ್ಲದೆ ಹರಾಜು ಮಂಜೂರ್ಮಾಡಲ್ಪಟ್ಟ ಸಂಗತಿ ಡೆಪ್ಯುಟಿ ಕಮ್ಮಿಷನರವರಿಂದ ಕ್ರಯದಾರನಿಗೆ ತಿಳಿಸಲ್ಪಟ್ಟ ತಾರೀಖು ಮೊದಲು 7 ದಿವಸದೊಳಗಾಗಿ ಕ್ರಯದ ಪೂರ್ತು ಮೊಬಲಗಿನ ಮೇಲೆ ರೂಪಾಯಿ 1ಕ್ಕೆ ಬಂದಾಣೆಯಂತೆ ಆಗುವ ಲೋಕಲ್‌ಸೆಸ್ ದೇಖೀಲ್ ಬಾಕಿ ಕ್ರಯದ ಮೊಬಲಗನ್ನ ಪಾವತಿ ಮಾಡದಿದ್ದರೆ ಹಾಂಗೆ ಡಿಪಾಜಿಟ್ ಯಿಟ್ಟ ಮೊಬಲಗು ಸರಕಾರಕ್ಕೆ ದಂಡವಾಗಿ ತೆಗದುಕೊಳ್ಳಲ್ಪಡುವದು. ಹಾಂಗೆ ಡಿಪಾಜಿಟ್ ಮೊಬಲಗು ಹಾಜರ್ಮಾಡದಿದ್ದರು, ಅಥವಾ ಬಾಕಿ ಕ್ರಯದ ಮೊಬಲಗು ಹಾಜರ್ಮಾಡದಿದ್ದರು ಹಕ್ಕುದಾರಿಯು ಅವ್ವಲ್ ಕ್ರಯದಾರನ ಖರ್ಚಿಗು ಮತ್ತು ನುಕ್ಸಾನಿಗೂ ಬೆಳಪಟ್ಟು ಪುನಹ ವಿಕ್ರಯಿಸಲ್ಪಡುವದು.

6. ಹರಾಜು ಷರತ್ತುಗಳು.

(a.) ಹಿಡುವಳಿ ಜಮಿನಿನಲ್ಲಿ ಯಿರತಕ್ಕ ಕಲ್ಲುಗಳನ್ನ ತೆಗದುಕೊಳ್ಳಿ ಬೇಕಾದರೆ ಹಿಡುವಳೀದಾರನ ಸಮ್ಮತಿಯನ್ನ ಪಡಿಯಬೇಕು, ಜಮಿನು ಹಿಡುವಳಿದಾರನು ತನ್ನ ಕಲ್ಲುಗಳನ್ನು ಸ್ವಂತ ಪ್ರಯೋಜನಕ್ಕಾಗಿ ತೆಗದುಕೊಳ್ಳಲು ಕೂಡದು ಇಜಾರೆದಾರನಿಗೆ ಮಾರಬೇಕೆ ಹೊರ್ತು ಇತರ ಜನಗಳಿಗೆ ಮಾರಲು ಕೂಡದು.

(b.) ಇಜಾರೇದಾರನು ಹುಲ್ಲುಬನ್ನಿ ಇಜಾರೆದಾರರ ಚರಾವು ಹಕ್ಕಿನಲ್ಲಿ ಪ್ರವೇಸಿಸ ಕೂಡದು.

(c.) ಬಂಜರು ಜಮಿರ್ಾಗಳು ಸಾಗುವಳಿ ಬಗ್ಯೆ ದರಖಾಸ್ತು ಬಂದಲ್ಲಿ ಆ ಪ್ರಕಾರ ಸಾಗುವಳಿಗೆ ಕೊಟ್ಟು ಬಿಡುವದಕ್ಕೆ ಕುರಂಗದ ಇಜಾರೆದಾರನು ಅಡ್ಡಿ ಹೇಳಕೂಡದು. ಅಂಥಾ ಜಮಿನುಗಳಲ್ಲಿ ಕುರಂಗದ ಕಲ್ಲುಗಳನ್ನ ತೆಗದುಕೊಳ್ಳತಕ್ಕ ಪಕ್ಕು ಮಾತ್ರ ಇಜಾರೆದಾರನಿಗೆ ವುಳದಿರುತ್ತೆ.

(d.) ಈ ಇಜಾರೆದಾರನು ಕಲ್ಲುಗಳಿಗೋಸ್ಕರ ಜಮಿರ್ಾಗಳನ್ನ ಅಗಿಯಕೂಡದು. ಬಂದುವೇಳೆ ಹಾಗೆ ಆಗದಲ್ಲಿ ಆ ಗುಂಡಿಗಳನ್ನ ತಪ್ಪಸ್ ಮುಚ್ಚಿಬಿಟ್ಟು ಸಾಗುವಳಿಗೆ ಜಮಿರ್ಾ ಲಾಯಕ್ ಯಿರುವ ಹಾಂಗೆ ಮಾಡಕು.

ಪಿ. ಯರ್. ಪೂರ್ಣಯ್ಯ,
ಡೆಪ್ಯುಟಿ ಕಮ್ಮಿಷನರ್.

ನಗರ ಡಿವಿಜರ್ ಡಿಸ್ಟ್ರಿಕ್ಟ್ ಜಡ್ಜ್‌ರವರ ಕೋರ್ಟಿನಲ್ಲಿ.

1890ನೇ ಇಸವಿ ಅರ್ಜೀ ನಂಬರ್ 82.

ಮೃತಪಟ್ಟ ಅಬ್ದುಲ್ ರಹಿಮಾನನ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಇಸೂಫ್ ಸಾಬನು ಮೃತಪಟ್ಟ ಸದರೀ ಅಬ್ದುಲ್ ರಹಿಮಾನನಿಗೆ ತಂದೆ ಆಗಬೇಕೆಂಬ ಹಕ್ಕುದಾರಿ ಮೇಲೆ ಚಿಕ್ಕಮಗಳೂರು ತಾಲ್ಲೂಕು ಮೈಲಿಮನೆ ದಾಖಲೆ ಗಡಬನಹಳ್ಳಿ ಸ್ಥಳದ ಇಸೂಫ್ ಸಾಬನು ಚಿಕ್ಕಮಗಳೂರು ವಾಸಸ್ಥರಾಗಿ ಮೃತಪಟ್ಟ ಅಬ್ದುಲ್‌ರಹಿಮಾನ ಜಿಂದಗಿ ಬಗ್ಯಾಗಿ ಬರತಕ್ಕ 1,500 ರೂಪಾಯಿ ಸಾಲಗಳನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಇಸೂಫ್‌ಸಾಬನ ಅರ್ಜಿಯನ್ನು 1890ನೇ ಇಸವಿ ಸೆಪ್ಟಂಬರ್ ತಿಂಗಳು ತಾರೀಖು 19ರಲ್ಲು ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಅಬ್ದುಲ್ ರಹಿಮಾನನ ಆಸ್ತಿಗೆ ಹಕ್ಕುದಾರರಾದ ವಿಶ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇಧೆ.

1890ನೇ ಇಸವಿ ಆಗಸ್ಟ್ ತಿಂಗಳು 11ನೇ ತಾರೀಖಿನಲ್ಲಿ ಕೋರ್ಟು ಮೊಹರಿನಿಸಿ ನಮ್ಮ ದಸ್ತಖತ್ತೋಡನೆ ಕೋರ್ಟಾಗಿಧೆ.

ಕೆ. ಕ್ರೈಸ್,
ಡಿಸ್ಟ್ರಿಕ್ಟ್ ಜಡ್ಜ್.

ಗೈರ್ ವಿಲಾ.

ಆದ ಪೂರಾ ಕರ್ಚಿನ ನೋಟಿನ.

ನಂ.	ಸರ್ಕಲ್	ಕ್ರಯ	ಸ್ವಂತಗಾರ—ಹುಣಸೂರಲ್ಲಿರುವ ಆಫ್ಟ್ಕಾರಿ
ಬಿ. 20—73368	ಮದರಾಸ್	ರೂ. 100	ಕಂಟ್ರಾಕ್ಟುದಾರ್ರ ಮುತ್ಸದ್ದಿ ರಾಜಾರ್ಯವ್.

ಗವರ್ಮೆಂಟ್ ತಯಾರೀ ಬಾಬತು ಸಿಂಕೋನಾ ಫೆಬ್ರಿಫ್ಯೂಜ್ ಎಂಬ ಔಷಧ.

ಈ ಔಷಧವು, ಕ್ವಿನ್ಯೆಗೆ ಬದಲಾಗಿ ಉಪಯೋಗಿಸತಕ್ಕ ಬಹಳ ಯೋಗ್ಯವಾದ ಔಷಧವಾಗಿರುತ್ತೆ. ಜನಗಳಿಗಾಗಿ ಧರ್ಮಾರ್ಥವಾಗಿ ಗವರ್ಮೆಂಟ್ ಆಫಿಸರ್‌ಗಳು ಕೊಂಡು ಕೊಳ್ಳಬಹುದು, ಬಂದು ಸಲಕ್ಕೆ ಇಪ್ಪತ್ತು ಪಾರ್ಟಗಳು ತೆಗದುಕೊಳ್ಳುವ ಯಾವ ಮನುಷ್ಯನಾದರೂ ಕಲ್ಕತ್ತೆಯಲ್ಲಿ ಬೊಟೂನಿಕಲ್ ಗಾರ್ಡನ್ ಸೂಪರಿಂಟೆಂಡೆಂಟರ ದೆಶೆಯಿಂದ ಇದರಡಿ ಕಂಡ ದರಗಳ ಪ್ರಕಾರ ನಗದು ಕೊಟ್ಟೇ ಕೊಂಡುಕೊಳ್ಳಬೇಕಾಗಿರುತ್ತೆ. ನಾಲ್ಕು ಔನ್ಸ್ ಔಷಧವುಳ್ಳ ತಗರದ ಡಬ್ಬೀ ಬಂದಕ್ಕೆ ರೂ. 3—14—0; ಎಂಟು ಔನ್ಸ್‌ವುಳ್ಳ ಡಬ್ಬಿಗೆ ರೂ 7—4—0; ಬಂದು ಪೌಂ ಔಷಧವುಳ್ಳ ಡಬ್ಬಿಗೆ ರೂ. 14—0—0; ಬೊಟೂನಿಕಲ್ ಗಾರ್ಡನ್ ಸೂಪರ್ಟಂಡೆಂಟರು ಇದರಡಿ ಕಂಡ ದರ ಪ್ರಕಾರ ನಗದಿಗೇನೇ ಸರ್ವಜನಗಳಿಗೂ ಬದಗಿಸಬಹುದು; ನಾಲ್ಕು ಔನ್ಸ್‌ವುಳ್ಳ ಡಬ್ಬಿ ಬಂದಕ್ಕೆ ರೂ. 4—14—0; ಎಂಟು ಔನ್ಸ್‌ವುಳ್ಳ ಡಬ್ಬಿಗೆ ರೂ. 9—4—0; ಬಂದು ಪೌಂವುಳ್ಳ ಡಬ್ಬಿಗೆ 17 ರೂ. 8 ಆಣೆ; ಈ ಔಷಧವು ಕಲ್ಕತ್ತೆಯಲ್ಲಿ ಮುಖ್ಯ ಮುಖ್ಯ ಯೂರೋಪಿಯರ್ಯ ವ ನೇಟಿವ್ ಮದ್ದಿನಂಗಡಿಯವರಿಂದ ಮಾರಲ್ಪಡುತ್ತೆ, ಸದರೀ ಸಿಮ್ಮತಿನೊಂದಿಗೆ ದರೆ 4 ಔನ್ಸ್ ತಗರದ ಡಬ್ಬಿಗೆ 4 ಆಣೆಯೂ, 8 ಔನ್ಸ್ ತಗರದ ಡಬ್ಬಿಗೆ 8 ಆಣೆ ಟಪ್ಪಾಲ್ ಹಾಸಲೂ, ಬಂದು ಪೌಂ ಡಬ್ಬಿಗೆ ಹನ್ನೆರಡು ಆಣೆ ಹಾಸಲೂ ಕೊಡಬೇಕು